# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 820+821 (505) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಡಾ: ಚಂದ್ರುಶೇಖರ್ ಬಿ.ಪಾಟೀಲ್ (ಪದವೀಧರರ ಕ್ಷೇತ್ರ) ಮತ್ತು ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 20.02.2024 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆ ಹುಮನಾಬಾದ್ ತಾಲ್ಲೂಕಿನ ಕೈಗಾರಿಕಾ ಪ್ರದೇಶದ ಕಾರ್ಖಾನೆಗಳು ವಿಷಪೂರಿತ ತ್ಯಾಜ್ಯ ವಸ್ತು ಬಿಡುಗಡೆಗೊಳಿಸುತ್ತಿದ್ದು, ಪಶು, ಪಕ್ಷಿ ಮತ್ತು ಮಾನವ ಸಂಕುಲಕ್ಕೆ ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೀದರ್ ಜಿಲ್ಲೆಯ ಹುಮನಾಬಾದ್ ಕೈಗಾರಿಕಾ ಪ್ರದೇಶಗಳಲ್ಲಿರುವ ಕಾರ್ಖಾನೆಗಳಿಂದ ಹೊರಸೂಸುವ ರಾಸಾಯನಿಕ ತ್ಯಾಜ್ಯ ಮತ್ತು ವಾಯು ಮಾಲಿನ್ಯ ಮಾಡುತ್ತಿರುವ ಕಾರ್ಖಾನೆಗಳ ವಿರುದ್ಧ ವಾಯು ಕಾಯ್ದೆ ಮತ್ತು ಜಲ ಕಾಯ್ದೆಯಡಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ (ಕೆಎಸ್‌ಪಿಸಿಬಿ) ಯಿಂದ ಮುಚ್ಚುವ ಆದೇಶ ನೀಡಿ ಕ್ರಮವಹಿಸಲಾಗುತ್ತಿದೆ.<br><br>ಈಗಾಗಲೇ ಹುಮನಾಬಾದ್ ಕೈಗಾರಿಕಾ ಪ್ರದೇಶದಲ್ಲಿ ಕೆಎಸ್‌ಪಿಸಿಬಿ ಯಿಂದ ಜಲ (ಮಾಲಿನ್ಯ ತಡೆಗಟ್ಟುವಿಕೆ ಮತ್ತು ನಿಯಂತ್ರಣ) ಕಾಯ್ದೆ, 1974 & ವಾಯು (ಮಾಲಿನ್ಯ ತಡೆಗಟ್ಟುವಿಕೆ ಮತ್ತು ನಿಯಂತ್ರಣ) ಕಾಯ್ದೆ 1981 ರಲ್ಲಿ ನೀಡಿರುವ ಸಮ್ಮತಿ ಪತ್ರದ ನಿಬಂಧನೆಗಳನ್ನು ಉಲ್ಲಂಘನೆ ಮಾಡಿರುವಂತಹ 10 ಪೈರೊಲೀಸಿಸ್ ಆಯಿಲ್ ಘಟಕಗಳಿಗೆ ಮುಚ್ಚುವ ಆದೇಶ ನೀಡಲಾಗಿದೆ ಎಂದು ತಿಳಿಸಿರುತ್ತಾರೆ. |
| ಆ | ವಿಷಪೂರಿತ ತ್ಯಾಜ್ಯ ವಸ್ತು ಬಿಡುಗಡೆಗೊಳಿಸುತ್ತಿರುವ ಕಾರ್ಖಾನೆ ಮಾಲೀಕರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು; | |
| ಇ | ಕೈಗಾರಿಕೆ ಪ್ರದೇಶದಲ್ಲಿ ಕಾರ್ಖಾನೆ ಪ್ರಾರಂಭಿಸಲು ಸರ್ಕಾರದ ಮಾನದಂಡಗಳು ಏನು? (ವಿವರ ನೀಡುವುದು) | ಜಲ (ಮಾಲಿನ್ಯ ತಡೆಗಟ್ಟುವಿಕೆ ಮತ್ತು ನಿಯಂತ್ರಣ) ಕಾಯ್ದೆ, 1974 ವಾಯು (ಮಾಲಿನ್ಯ ತಡೆಗಟ್ಟುವಿಕೆ ಮತ್ತು ನಿಯಂತ್ರಣ) ಕಾಯ್ದೆ, 1981 ಮತ್ತು ಅಪಾಯಕಾರಿ ತ್ಯಾಜ್ಯ ನಿರ್ವಹಣೆ ನಿಯಮಗಳು, 2016ರ ಅಡಿಯಲ್ಲಿ ಕೈಗಾರಿಕಾ ಪ್ರದೇಶದಲ್ಲಿ ಕಾರ್ಖಾನೆಗಳ ಕಾರ್ಯ ಚಟುವಟಿಕೆಯ ಅನುಸಾರದಲ್ಲಿ ನಿಬಂಧನೆಗಳೊಂದಿಗೆ ಸಮ್ಮತಿ ಪತ್ರವನ್ನು ಪಡೆದ ನಂತರ ಕಾರ್ಖಾನೆ ಪ್ರಾರಂಭಿಸಬೇಕು. |

ಸಿಐ 66 ಎಸ್‌ಪಿಐ 2024

**(ಎಂ.ಬಿ. ಪಾಟೀಲ)**

ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು